Off) +91(0821)2526301-353
(Fax) +91(0821) 2330166
E-mail: ceo_zp_mys@nic.in
admzpmys@gmail.com

**ಜಿಲ್ಲಾ ಪಂಚಾಯತ್, ಮೈಸೂರು**
**ZILLA PANCHAYAT, MYSURU**

ಸಂಖ್ಯೆ : ಇ-ಆಡಳಿತ/ಶಿಷ್ಟಾಚಾರ 01/2016-17

ದಿನಾಂಕ : 19/12/2016

**ಪ್ರಥಮಾದ್ಯತೆ**

# ಸುತ್ತೋಲೆ

**ವಿಷಯ :** ಮಾನ್ಯ ಮುಖ್ಯಮಂತ್ರಿಗಳು ಮೈಸೂರು ಜಿಲ್ಲೆಗೆ ಭೇಟಿ ನೀಡುವ ಸಂಧರ್ಭದಲ್ಲಿ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರಸ್ಥಾನದಲ್ಲಿ ಹಾಜರಿರುವ ಬಗ್ಗೆ.

******

ಜಿಲ್ಲಾ ಪಂಚಾಯತ್ ಕಚೇರಿಯ ಹಾಗು ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ರಜೆ ಮೇಲೆ ತೆರಳುವ ಮುನ್ನ ಹಾಗು ಸಭೆಗಳಿಗೆ ಹಾಜರಾಗುವ ಸಲುವಾಗಿ ಕೇಂದ್ರಸ್ಥಾನ ಬಿಡುವ ಮುನ್ನ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮತಿ ಪಡೆಯಬೇಕಿರುತ್ತದೆ.

ದಿನಾಂಕ : 18/12/2016 ರಂದು ಮಾನ್ಯ ಮುಖ್ಯಮಂತ್ರಿಗಳು ನಂಜನಗೂಡು ತಾಲ್ಲೂಕಿಗೆ ಅಧಿಕೃತ ಕಾರ್ಯಕ್ರಮದ ನಿಮಿತ್ತ ಭೇಟಿ ನೀಡಿದ್ದ ಸಂಧರ್ಭದಲ್ಲಿ, ಕುಡಿಯುವ ನೀರಿನ ಯೋಜನೆಗಳ ಬಗ್ಗೆ ಮಾಹಿತಿ ಕೇಳಿದ್ದು, ಕಾರ್ಯಪಾಲಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗರವರು ಅಲ್ಲಿ ಹಾಜರಾಗದೇ ಇದ್ದುದರಿಂದ, ಮಾಹಿತಿ ನೀಡಲಾಗದೇ ತೀವ್ರ ಮುಜುಗರ ಅನುಭವಿಸುವ ಸನ್ನಿವೇಶ ಎದುರಾಗಿರುತ್ತದೆ.

ಆದ್ದರಿಂದ, ಮಾನ್ಯ ಮುಖ್ಯಮಂತ್ರಿಗಳು ಮೈಸೂರು ಜಿಲ್ಲೆಗೆ ಭೇಟಿ ನೀಡುವ ಸಂಧರ್ಭದಲ್ಲಿ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಕಡ್ಡಾಯವಾಗಿ ಕೇಂದ್ರಸ್ಥಾನದಲ್ಲಿ ಹಾಜರಿರಲು ಸೂಚಿಸಿದೆ. ಹಾಗು ಮಾನ್ಯ ಮುಖ್ಯಮಂತ್ರಿಗಳು ಭಾಗವಹಿಸುವ ಸಭೆ ಹಾಗು ಅಧಿಕೃತ ಸರ್ಕಾರಿ ಕಾರ್ಯಕ್ರಮಗಳಲ್ಲಿ ಕಡ್ಡಾಯವಾಗಿ ಹಾಜರಿದ್ದು, ತಮ್ಮ ಇಲಾಖೆಗೆ ಸಂಬಂಧಿಸಿದ ಪೂರ್ಣ ಮಾಹಿತಿಗಳನ್ನು, ಮಾನ್ಯ ಮುಖ್ಯಮಂತ್ರಿಗಳು ಹಾಗು ಇತರೆ ಸಚಿವರು ಅಪೇಕ್ಷಿಸಿದಲ್ಲಿ ತಕ್ಷಣವೇ ಮಾಹಿತಿ ನೀಡಲು ಸಿದ್ಧರಿರತಕ್ಕದ್ದು. ಆಯೋಜಿಸಲಾಗುವ ಸಭೆ/ಕಾರ್ಯಕ್ರಮಗಳು ಇತರೆ ಇಲಾಖೆಗಳಿಗೆ ಸಂಬಂಧಿಸಿದ್ದಾಗಿದ್ದರೂ ಸಹ, ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳು ಸದರಿ ಸಭೆ/ಕಾರ್ಯಕ್ರಮದಲ್ಲಿ ಕಡ್ಡಾಯವಾಗಿ ಹಾಜರಿರಲು ತಿಳಿಸಿದೆ.

**ಮುಖ್ಯಕಾರ್ಯನಿರ್ವಾಹಕ ಅಧಿಕಾರಿ**
**ಜಿಲ್ಲಾ ಪಂಚಾಯತ್, ಮೈಸೂರು**

**ಪ್ರತಿಯನ್ನು,**

(1) ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರುರವರಿಗೆ ಮಾಹಿತಿಗಾಗಿ ಕಳುಹಿಸಿದೆ.
(2) ಜಿಲ್ಲಾ ಪಂಚಾಯತ್ ಕಚೇರಿಯ ಎಲ್ಲಾ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
(3) ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
(4) ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.